ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/34/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 25.08.2021

**ಸುತ್ತೋಲೆ**

**ವಿಷಯ:** 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿ-4(6) ಸಪ್ರೌಶಾ/ಶಾ.ಕಾ.ಪ್ರ/23/2020-21, ದಿನಾಂಕ: 16.08.2021

*****

ಉಲ್ಲೇಖಿತ ಸುತ್ತೋಲೆಯಲ್ಲಿ ರಾಜ್ಯದಲ್ಲಿನ ಪ್ರೌಢ ಶಾಲೆಗಳಲ್ಲಿನ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ದಿನಾಂಕ: 23.08.2021 ರಿಂದ ಪ್ರಾರಂಭಿಸಿ ಬೋಧನಾ ತರಗತಿಗಳನ್ನು ನಡೆಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಹಿನ್ನೆಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ 2021-22 ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅತಿಥಿ ಉಪನ್ಯಾಸಕರ ಹುದ್ದೆಗೆ ಈ ಹಿಂದೆ ಸೇವೆ ಸಲ್ಲಿಸಿದ/ಆಸಕ್ತರಿಂದ ಸಂಸ್ಥೆಯ ಹಂತದಲ್ಲಿ ಅರ್ಜಿ ಪಡೆದು, ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ಹಿರಿಯ ಉಪನ್ಯಾಸಕರು ಮತ್ತು ಆಡಳಿತ ವಿಭಾಗದ ಅಧಿಕಾರಿ/ಸಿಬ್ಬಂದಿ ವರ್ಗದವರನ್ನೊಳಗೊಂಡ ಆಯ್ಕೆ ಸಮಿತಿ ರಚಿಸಿ, ಅರ್ಜಿಗಳನ್ನು ಪರಿಶೀಲಿಸಿ, ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅತಿಥಿ ಉಪನ್ಯಾಸಕರನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಿಸಿಕೊಳ್ಳಲು ಕೆಳಕಂಡ ಷರತ್ತು / ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲಾಗಿದೆ.

**ಷರತ್ತು / ನಿಬಂಧನೆಗಳು:-**

1. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ಧ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯತಕ್ಕದ್ದು;
2. ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವುದು.
3. ಅತಿಥಿ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡಬೇಕಾದ ಸಂದರ್ಭದಲ್ಲಿ, ಅತಿಥಿ ಉಪನ್ಯಾಸಕರಾಗಿ ಹೆಚ್ಚಿನ ಅವಧಿ ಸೇವೆ ಸಲ್ಲಿಸಿದವರಿಗೆ ಅವಕಾಶ ನೀಡಿ ಕಡಿಮೆ ಅವಧಿಯ ಸೇವೆ ಸಲ್ಲಿಸಿದವರನ್ನು ಕೈಬಿಡುವುದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು (ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ.

**ಪ್ರತಿ:-**

1. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ದಿನಾಂಕ: 25.08.2021 ರ ಸುತ್ತೋಲೆ ಸಂಖ್ಯೆ: DTE-ADMIOEST(3)/34/2021 ಕ್ಕೆ ಅನುಬಂಧ

**2021-22ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಆಯ್ಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿರುವ ಅತಿಥಿ ಉಪನ್ಯಾಸಕರ ಸಂಸ್ಥೆವಾರು ಸಂಖ್ಯಾ ಮಾಹಿತಿ**

| ಕ್ರ. ಸಂ. | ಸಂಸ್ಥೆಯ ಸಂಕೇತ | ಸಂಸ್ಥೆಯ ಹೆಸರು | ಪ್ರಸ್ತಾಪಿಸಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|
| 1 | 301 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭದ್ರಾವತಿ | 12 |
| 2 | 302 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಮಂಗಳೂರು | 07 |
| 3 | 303 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 10 |
| 4 | 304 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 05 |
| 5 | 305 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಕಲಬುರಗಿ | 02 |
| 6 | 306 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 06 |
| | | ಒಟ್ಟು ಸಂಖ್ಯೆ | **42** |

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು (ಆಡಳಿತ),**

ತಾಂತ್ರಿಕ ಶಿಕ್ಷಣ ಇಲಾಖೆ,

ಬೆಂಗಳೂರು